**Akashvani : Bangalore**
**National Bulletin In Kannada**
**26.06.2024 / 7.35 am**

ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

**<><*<><>*><>**

ಮುಖ್ಯಾಂಶಗಳು

೧. ಲೋಕಸಭೆಯಲ್ಲಿ ಇಂದು ನೂತನ ಸ್ಪೀಕರ್ ಆಯ್ಕೆ; ಪ್ರತಿಪಕ್ಷ ನಾಯಕರಾಗಿ ರಾಹುಲ್ ಗಾಂಧಿ ನೇಮಕ

೨. ಸಕ್ಕರೆ ಮತ್ತು ಕಬ್ಬು ವಲಯದಿಂದ ವ್ಯಾಪಕ ಉದ್ಯೋಗಾವಕಾಶ- ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ

೩. ಬಜೆಟ್ ಪೂರ್ವಭಾವಿ ಸಮಾಲೋಚನೆ ಮುಂದುವರಿಸಿದ ಸಚಿವೆ ನಿರ್ಮಲಾ ಸೀತಾರಾಮನ್

೪. ಇಂದು ಅಂತಾರಾಷ್ಟ್ರೀಯ ಮಾದಕ ದ್ರವ್ಯ ವಿರೋಧಿ ದಿನ; ಎಲ್ಲೆಡೆ ಜನಜಾಗೃತಿ

೫. ಯುಎಸ್ ಓಪನ್ ಬ್ಯಾಡ್ಮಿಂಟನ್ ಟೂರ್ನಿಗೆ ಚಾಲನೆ; ಭಾರತದ ಕೃಷ್ಣ ಪ್ರಸಾದ್- ಸಾಯಿ ಪ್ರತೀಕ್ ಜೋಡಿ ಶುಭಾರಂಭ

**<><*<><>*><>**

೧೮ನೇ ಲೋಕಸಭೆಯಲ್ಲಿಂದು ನೂತನ ಸ್ಪೀಕರ್ ಆಯ್ಕೆ ನಡೆಯಲಿದೆ. ಎನ್‌ಡಿಎ ಮೈತ್ರಿಕೂಟ ಬಿಜೆಪಿಯ ಹಿರಿಯ ಸದಸ್ಯ ಓಂ ಬಿರ್ಲಾ ಅವರನ್ನು ಸ್ಪೀಕರ್ ಹುದ್ದೆಗೆ ಮತ್ತೊಮ್ಮೆ ನಾಮನಿರ್ದೇಶನಗೊಳಿಸಿದ್ದು, ಐಎನ್‌ಡಿಐಎ ಮೈತ್ರಿಕೂಟದಿಂದ ಕಾಂಗ್ರೆಸ್ ಸಂಸದ ಕೆ.ಸುರೇಶ್ ಉಮೇದುವಾರಿಕೆ ಸಲ್ಲಿಸಿದ್ದಾರೆ. ಉಭಯ ಅಭ್ಯರ್ಥಿಗಳು ನಿನ್ನೆ ನಾಮಪತ್ರ ಸಲ್ಲಿಸಿದರು. ಸ್ಪೀಕರ್ ಹುದ್ದೆಗೆ ಒಮ್ಮತದ ಅಭ್ಯರ್ಥಿಯಾಗಿ ಓಂ ಬಿರ್ಲಾ ಅವರನ್ನು ಪರಿಗಣಿಸುವ ಕುರಿತು ಸರ್ಕಾರ, ವಿರೋಧ ಪಕ್ಷಗಳ ಜೊತೆ ಸಮಾಲೋಚನೆ ನಡೆಸಿತುತ. ಕೇಂದ್ರ ಸಚಿವರಾದ ರಾಜನಾಥ್ ಸಿಂಗ್, ಅಮಿತ್ ಶಾ ಮತ್ತು ಪಿಯೂಷ್ ಗೋಯಲ್, ಕಾಂಗ್ರೆಸ್ ಮುಖಂಡ ಕೆ.ಸಿ.ವೇಣುಗೋಪಾಲ್ ಮತ್ತು ಡಿಎಂಕೆಯ ಟಿ.ಆರ್.ಬಾಲು ಅವರೊಂದಿಗೆ ಈ ಕುರಿತು ಸಭೆ ನಡೆಸಿದ್ದರು. ಲೋಕಸಭೆಯ ಸ್ಪೀಕರ್ ಅವರನ್ನು ಅವಿರೋಧವಾಗಿ ಆಯ್ಕೆ ಮಾಡಬೇಕು ಎಂದು ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು ಒತ್ತಿ ಹೇಳಿದರು. ಸಂಸತ್ ಭವನದ ಸಂಕೀರ್ಣದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸ್ವಾತಂತ್ರ್ಯ ನಂತರ ಸ್ಪೀಕರ್ ಹುದ್ದೆಗೆ ಇಲ್ಲಿಯವರೆಗೆ ಯಾವುದೇ ಚುನಾವಣೆ ನಡೆದಿಲ್ಲ. ಅಭ್ಯರ್ಥಿಯ ಬಗ್ಗೆ ಒಮ್ಮತ ಮೂಡಿಸಲು ಸರ್ಕಾರ ವಿರೋಧ ಪಕ್ಷಗಳ ನಾಯಕರೊಂದಿಗೆ ಚರ್ಚಿಸಲಾಯಿತು. ಆದರೆ ಕಾಂಗ್ರೆಸ್ ನೇತೃತ್ವದ ಪ್ರತಿಪಕ್ಷಗಳು, ಷರತ್ತುಗಳನ್ನು ವಿಧಿಸಿ ಉಪಸಭಾಪತಿ ಸ್ಥಾನಕ್ಕೆ ಬೇಡಿಕೆ ಇಟ್ಟವು ಎಂದು ಅವರು ಹೇಳಿದರು.

**<><*<><>*><>**

ಲೋಕಸಭೆಯ ಪ್ರತಿಪಕ್ಷ ನಾಯಕರಾಗಿ ರಾಹುಲ್ ಗಾಂಧಿ ನೇಮಕಗೊಂಡಿದ್ದಾರೆ. ಎಐಸಿಸಿ ಪ್ರಧಾನ ಕಾರ್ಯದರ್ಶಿ ಕೆ.ಸಿ. ವೇಣುಗೋಪಾಲ್ ಈ ಕುರಿತು ಹೇಳಿಕೆ ನೀಡಿದ್ದಾರೆ. ಇತ್ತೀಚೆಗೆ ನಡೆದ ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ೯೯ ಕ್ಷೇತ್ರಗಳಲ್ಲಿ ಗೆಲುವು ಸಾಧಿಸಿದ್ದು, ಈ ಮೂಲಕ ಪ್ರತಿಪಕ್ಷ ಸ್ಥಾನಮಾನವನ್ನು ಕಾಂಗ್ರೆಸ್ ಪಡೆದಿದೆ. ೨೦೧೪ ಮತ್ತು ೨೦೧೯ ರ ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷಕ್ಕೆ ಪ್ರತಿಪಕ್ಷ ಹುದ್ದೆ ಪಡೆಯಲು ಸಾಧ್ಯವಾಗಿರಲಿಲ್ಲ. ಪ್ರತಿಪಕ್ಷ ನಾಯಕರಾಗಿ ಆಯ್ಕೆಯಾದ ರಾಹುಲ್ ಗಾಂಧಿ ಅವರನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅಭಿನಂದಿಸಿದ್ದಾರೆ. ಈ ಕುರಿತು ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ಅವರು, ರಾಹುಲ್ ಗಾಂಧಿ ಅವರು ಸೈದ್ಧಾಂತಿಕ ಬದ್ಧತೆ, ದೂರದರ್ಶಿತ್ವ ಹಾಗೂ ಜನಪರ ಕಾಳಜಿ ಮೂಲಕ ಸಮರ್ಥವಾಗಿ ಕಾರ್ಯ ನಿರ್ವಹಿಸಲಿ ಎಂದು ಹಾರೈಸಿದ್ದಾರೆ.

**<><*<><>*><>**

ಕೇಂದ್ರ ಗ್ರಾಹಕ ವ್ಯವಹಾರಗಳು, ಆಹಾರ ಮತ್ತು ಸಾರ್ವಜನಿಕ ವಿತರಣೆ, ನವ ಹಾಗೂ ನವೀಕರಿಸಬಹುದಾದ ಇಂಧನ ಸಚಿವ ಪ್ರಲ್ಹಾದ್ ಜೋಶಿ ದೆಹಲಿಯ ಭಾರತ್ ಮಂಟಪದಲ್ಲಿ ನಿನ್ನೆ ಅಂತಾರಾಷ್ಟ್ರೀಯ ಸಕ್ಕರೆ ಸಂಸ್ಥೆಯ ಮೂರು ದಿನಗಳ ೬೪ನೇ ಮಂಡಳಿ ಸಭೆ ಉದ್ಘಾಟಿಸಿದರು. ಕಬ್ಬು, ಸಕ್ಕರೆ ಮತ್ತು ಸಂಬಂಧಿತ ಕ್ಷೇತ್ರಗಳಲ್ಲಿ ಭವಿಷ್ಯದ ಸಾಧ್ಯತೆಗಳು, ಸವಾಲುಗಳು ಮತ್ತು ಕಾರ್ಯತಂತ್ರಗಳ ಬಗ್ಗೆ ಚರ್ಚಿಸಲು ೩೦ಕ್ಕೂ ಹೆಚ್ಚು ದೇಶಗಳ ತಜ್ಞರು ಸಭೆಯಲ್ಲಿ ಭಾಗವಹಿಸಿದ್ದಾರೆ. ಇದಕ್ಕೂ ಮುನ್ನ ಭಾರತ ೨೦೧೨ ರಲ್ಲಿ ಐಎಸ್‌ಒ ಮಂಡಳಿ ಸಭೆಯ ೪೧ನೇ ಅಧಿವೇಶನವನ್ನು ಆಯೋಜಿಸಿತ್ತು. ಸಚಿವ ಪ್ರಹ್ಲಾದ್ ಜೋಶಿ ಮಾತನಾಡಿ, ಸುಮಾರು ೫ ಕೋಟಿ ರೈತರು ಕಬ್ಬಿನ ಕೃಷಿಯಲ್ಲಿ ತೊಡಗಿದ್ದಾರೆ. ಈ ಉದ್ಯಮ ನೇರವಾಗಿ ಮತ್ತು ಪರೋಕ್ಷವಾಗಿ ಸಾಕಷ್ಟು ಉದ್ಯೋಗಾವಕಾಶಗಳನ್ನು ಒದಗಿಸುತ್ತಿದೆ. ಪ್ರಧಾನಿ ನರೇಂದ್ರ ಮೋದಿ ನಾಯಕತ್ವದಲ್ಲಿ ಸರ್ಕಾರ ರೈತರ ಕಲ್ಯಾಣ, ಗ್ರಾಹಕರು ಮತ್ತು ಉದ್ಯಮದ ಹಿತಾಸಕ್ತಿಯನ್ನು ಕಾಪಾಡಲು ಹೆಚ್ಚಿನ ಆದ್ಯತೆ ನೀಡುತ್ತದೆ. ಈ ಮೂಲಕ ಕೃಷಿ ಪದ್ಧತಿಗಳನ್ನು ಸುಧಾರಿಸಲು ಸಹಯೋಗದ ಪ್ರಯತ್ನಗಳನ್ನು ಖಚಿತಪಡಿಸುತ್ತದೆ ಎಂದು ಹೇಳಿದರು. ಸಕ್ಕರೆ ಮತ್ತು ಜೈವಿಕ ಇಂಧನ ಕ್ಷೇತ್ರಗಳಲ್ಲಿ ತಂತ್ರಜ್ಞಾನ ಮತ್ತು ಕೌಶಲ್ಯಗಳನ್ನು ಮುನ್ನಡೆಸುವ ಭಾರತದ ಬದ್ಧತೆಯನ್ನು ಬಿಂಬಿಸಿದರು. ಸಕ್ಕರೆಯ ಮೇಲೆ ಭಾರತದ ಸಾಂಸ್ಕೃತಿಕ ಮತ್ತು ಆರ್ಥಿಕ ಅವಲಂಬನೆಯನ್ನು ಸಚಿವರು ಒತ್ತಿಹೇಳಿದ ಸಚಿವರು, ಭಾರತ ವಿಶ್ವದ ಅತಿದೊಡ್ಡ ಸಕ್ಕರೆ ಗ್ರಾಹಕ ಮತ್ತು ಗಮನಾರ್ಹ ಜೈವಿಕ ಇಂಧನ ಉತ್ಪಾದಕ ರಾಷ್ಟ್ರದ ಸ್ಥಾನಮಾನ ಹೊಂದಿದೆ, ಪೆಟ್ರೋಲ್ ನೊಂದಿಗೆ ಶೇಕಡ ೧೨ಕ್ಕೂ ಹೆಚ್ಚು ಎಥೆನಾಲ್ ಮಿಶ್ರಣವನ್ನು ಸಾಧಿಸಿದೆ ಮತ್ತು ಶೀಘ್ರದಲ್ಲೇ ಶೇಕಡ ೨೦ ರಷ್ಟು ಗುರಿಯನ್ನು ಸಾಧಿಸಲಿದೆ ಎಂದು ಸಚಿಒವ ಪ್ರಹ್ಲಾದ್ ಜೋಶಿ ಹೇಳಿದರು. ಹವಾಮಾನ ಬದಲಾವಣೆಯನ್ನು ಎದುರಿಸುವಲ್ಲಿ ಜೈವಿಕ ಇಂಧನಗಳ ಪಾತ್ರ ಅನನ್ಯ. ಸಕ್ಕರೆ ಉದ್ಯಮ ಮತ್ತು ರೈತರ ಮೇಲೆ ಭಾರತದ ಎಥೆನಾಲ್ ಮಿಶ್ರಿತ ಪೆಟ್ರೋಲ್ ರ್ಯಕ್ರಮದ ಸಕಾರಾತ್ಮಕ ಪರಿಣಾಮಗಳನ್ನು ವಿವರಿಸಿದರು. ಸಕ್ಕರೆ ಕ್ಷೇತ್ರದಲ್ಲಿ ಭವಿಷ್ಯದ ಉದ್ಯಮಗಳಿಗೆ ಈ ಸಮ್ಮೇಳನವನ್ನು ಬಳಸಿಕೊಳ್ಳುವಂತೆ ಸಚಿವರು ಪ್ರತಿನಿಧಿಗಳನ್ನು ಪ್ರೋತ್ಸಾಹಿಸಿದರು ಮತ್ತು ಅದರ ಯಶಸ್ಸಿಗೆ ಹಾರೈಸಿದರು. ಕೇಂದ್ರ ಆಹಾರ ಮತ್ತು ಸಾರ್ವಜನಿಕ ವಿತರಣಾ ಇಲಾಖೆಯ ಕಾರ್ಯದರ್ಶಿ ಮತ್ತು ಐಎಸ್‌ಒ ಅಧ್ಯಕ್ಷ ಸಂಜೀವ್ ಚೋಪ್ರಾ ಮಾತನಾಡಿ, ಬರ ನಿರೋಧಕ ಕಬ್ಬನ್ನು ಅಭಿವೃದ್ಧಿ ಪಡಿಸುವುದು, ನೀರನ್ನು ಸಂರಕ್ಷಿಸುವುದು ಮತ್ತು ಜೈವಿಕ ಇಂಧನಗಳನ್ನು ಉತ್ತೇಜಿಸುವುದು ಸೇರಿದಂತೆ ಸುಸ್ಥಿರ ಅಭ್ಯಾಸಗಳ ಮೂಲಕ ಹವಾಮಾನ ಬದಲಾವಣೆಯನ್ನು ನಿಭಾಯಿಸಲು ಜಾಗತಿಕ ಸಕ್ಕರೆ ಮತ್ತು ಎಥೆನಾಲ್ ಉದ್ಯಮದ ತುರ್ತು ಅಗತ್ಯವಿದೆ ಎಂದರು.

**<><*<><>*><>**

ಕೇಂದ್ರ ಹಣಕಾಸು ಸಚಿವೆ ನಿರ್ಮಿಲಾ ಸೀತಾರಾಮನ್, ನಿನ್ನೆ ದೆಹಲಿಯಲ್ಲಿ ಬಜೆಟ್ ಪೂರ್ವಭಾವಿ ಸಭೆ ನಡೆಸಿದರು. ಈ ಮೂಲಕ ಅವರು, ಸಮಾಲೋಚನೆ ಪ್ರಕ್ರಿಯೆಯನ್ನು ಮುಂದುವರಿಸಿದ್ದಾರೆ. ವ್ಯಾಪಾರ ಮತ್ತು ಸೇವಾ ವಲಯದ ಪ್ರತಿನಿಧಿಗಳಿಂದ ಅಹವಾಲು ಸ್ವೀಕರಿಸಿದರು. ಇದಕ್ಕೂ ಮುನ್ನ ಸಚಿವರು, ಉದ್ಯೋಗ ಮತ್ತು ಕೌಶಾಲ್ಯಾಭಿವೃದ್ಧಿ ವಲಯದ ಪರಿಣಿತರ ಜೊತೆಯೂ ಸಮಾಲೋಚಿಸಿದರು. ಕಳೆದ ವಾರ ವಿವಿಧ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳ  ಹಣಕಾಸು ಸಚಿವರ ಜೊತೆ ಚರ್ಚೆ ನಡೆಸಿದ್ದರು.

<><*<><>*><>

ಇಂದು ಅಂತಾರಾಷ್ಟ್ರೀಯ ಮಾದಕ ದ್ರವ್ಯ ವಿರೋಧಿ ದಿನ. ೧೯೮೭ ಡಿಸೆಂಬರ್ ೭ರಂದು ವಿಶ್ವಸಂಸ್ಥೆಯ ಸಾಮಾನ್ಯ ಸಭೆಯಲ್ಲಿ ಜೂನ್ ೨೬ ಅನ್ನು ಅಂತಾರಾಷ್ಟ್ರೀಯ ಮಾದಕ ವಸ್ತುಗಳ ದುರುಪಯೋಗ ಮತ್ತು ಕಾನೂನು ಬಾಹಿರ ಸಾಗಾಟ ವಿರೋಧಿ ದಿನ ಎಂದು ಘೋಷಿಸಲಾಯಿತು. ವಿಶ್ವದಾದ್ಯಂತ ಈ ದುಶ್ಚಟಗಳಿಗೆ ಮಕ್ಕಳು ಮತ್ತು ಯುವಕರು ಹೆಚ್ಚು ಬಲಿಯಾಗುತ್ತಿದ್ದಾರೆ. ಮಾದಕ ವಸ್ತುಗಳ ಮಾರಾಟ ಹಾಗೂ ಸಾಗಾಣೆ ಕಾನೂನ ಬಾಹಿರ ಎಂಬ ಅರಿವಿದ್ದರೂ ಈ ಪಿಡುಗನ್ನು ನಿಯಂತ್ರಿಸುವ ಸವಾಲು ಎಲ್ಲ ರಾಷ್ಟ್ರಗಳಿಗೂ ಎದುರಾಗಿದೆ.  ಡ್ರಗ್ ಮಾಫಿಯಾ ಹತೋಟಿಗೆ ತರಲು ವಿಶ್ವದೆಲ್ಲೆಡೆ ಪ್ರಯತ್ನಗಳು ನಡೆಯುತ್ತಿವೆ. ಆದರೆ ಇದನ್ನು ಬುಡ ಸಮೇತ ಕಿತ್ತು ಹಾಕಲು ಸಾಧ್ಯವಾಗಿಲ್ಲ. ಪ್ರತಿಯೊಬ್ಬ ನಾಗರಿಕನೂ ಈ ಬಗ್ಗೆ ಜಾಗೃತಿ ಹೊಂದಿ ವಿಶ್ವವನ್ನು ಮಾದಕವಸ್ತುಗಳಿಂದ ಮುಕ್ತವಾಗಿಸುವ ಜವಾಬ್ದಾರಿ ತೆಗೆದುಕೊಳ್ಳಬೇಕಿದೆ. ಈ ನಿಟ್ಟಿನಲ್ಲಿ ಜಗತ್ತಿನಾದ್ಯಂತ ಇಂದು ಜನ ಜಾಗೃತಿ ಕಾರ್ಯಕ್ರಮ ಹಾಗೂ ಅಭಿಯಾನಗಳು ನಡೆಯುತ್ತಿವೆ.

<><*<><>*><>

ತಂಬಾಕು ಮತ್ತು ಮದ್ಯ ಮಾನವನ ದೇಹಕ್ಕೆ ಮಾರಕವಾಗಿದ್ದು, ಕಾನೂನು ಬಾಹಿರವಾಗಿ ತಂಬಾಕು ಬೆಳೆಯುವ ಮತ್ತು ಮದ್ಯ ಉತ್ಪಾದನೆ ಮಾಡುವ ಜಾಲವನ್ನು ಪರಿಣಾಮಕಾರಿಯಾಗಿ ಹತ್ತಿಕ್ಕುವಂತೆ ವಿಶ್ವ ಆರೋಗ್ಯ ಸಂಘಟನೆಗೆ ತನ್ನ ಸದಸ್ಯ ರಾಷ್ಟ್ರಗಳಿಗೆ ಕರೆ ನೀಡಿದೆ.  ವಿಶ್ವ ಆರೋಗ್ಯ ಸಂಸ್ಥೆಯ ಆಗ್ನೇಯ ಏಷ್ಯಾ ವಲಯದಲ್ಲಿ ಭಾರತ ಮತ್ತು ಶ್ರೀಲಂಕಾ ದೇಶಗಳು ತಂಬಾಕು ನಿಯಂತ್ರಣ ಕುರಿತಂತೆ ವಿಶ್ವ ಆರೋಗ್ಯ ಸಂಸ್ಥೆಯ ಸಮಾವೇಶದಲ್ಲಿ ಸಾರಥ್ಯ ವಹಿಸಿದ್ದು, ಬ್ಯಾಂಕಾಕ್ ನಲ್ಲಿ ಈ ಸಂಬಂಧ ನಿನ್ನೆ ಕಾರ್ಯಾಗಾರ ನಡೆಯಿತು.

<><*<><>*><>

ರಷ್ಯಾದ ಮಾಜಿ ರಕ್ಷಣಾ ಸಚಿವ ಸರ್ಗೈ ಶೋಯಿಗು ಮತ್ತು ರಕ್ಷಣಾ ಸಿಬ್ಬಂದಿ ವಿಭಾಗದ ಮುಖ್ಯಸ್ಥ ವಲೆರೇ ಗೆರಸಿಮೊವ್ ಅವರ ಬಂಧನಕ್ಕೆ ಅಂತರರಾಷ್ಟ್ರೀಯ ಅಪರಾಧ ನ್ಯಾಯಾಲಯ ಬಂಧನ ವಾರೆಂಟ್ ಹೊರಡಿಸಿದೆ.  ಉಕ್ರೇನ್ ಯುದ್ಧ ಸಂದರ್ಭದಲ್ಲಿ ಇವರು ಯುದ್ಧ ಅಪರಾಧಗಳನ್ನು ಎಸಗಿದ್ದಾರೆ ಮತ್ತು ಮಾನವೀಯತೆಯ ವಿರುದ್ಧ ಅಪರಾಧಗಳನ್ನು ಮಾಡಿದ್ದಾರೆ. ಇವರು ೨೦೨೨ ಮತ್ತು ೨೦೨೩ ರಲ್ಲಿ ನಾಗರಿಕರನ್ನು ಗುರಿಯಾಗಿಸಿಕೊಂಡು ದಾಳಿ ನಡೆಸಿದ್ದಾರೆ ಎಂದು ಐಸಿಸಿ ನ್ಯಾಯಾಲಯದ ನ್ಯಾಯಮೂರ್ತಿಯವರು ತಮ್ಮ ತೀರ್ಪಿನಲ್ಲಿ ತಿಳಿಸಿದ್ದಾರೆ.

<><*<><>*><>

ಬ್ಯಾಡ್ಮಿಂಟನ್ ವರ್ಲ್ಡ್ ಫೆಡೆರೇಷನ್ ನಡೆಸುವ ಯುಎಸ್ ಓಪನ್ ಬ್ಯಾಡ್ಮಿಂಟನ್ ಟೂರ್ನಿಗೆ ಅಮೆರಿಕಾದ ಟೆಕ್ಸಾಸ್‌ನ ಫೋರ್ಟ್ ವರ್ತ್‌ನಲ್ಲಿ ನಿನ್ನೆ ಸಂಜೆ ಚಾಲನೆ ದೊರೆತಿದೆ. ಪುರುಷರ ಡಬಲ್ಸ್ ವಿಭಾಗದಲ್ಲಿ ಕಳೆದ ರಾತ್ರಿ ನಡೆದ ೩೨ರ ಸುತ್ತಿನ ಪಂದ್ಯದಲ್ಲಿ ಭಾರತದ ಕೃಷ್ಣ ಪ್ರಸಾದ್ ಗರಗ ಮತ್ತು ಸಾಯಿ ಪ್ರತೀಕ್ ಕೆ ಜೋಡಿ, ೨೧-೧೪, ೨೧-೧೨ ಅಂಕಗಳ ಅಂತರದಲ್ಲಿ ಐರ್ಲೆಂಡ್ ಜೋಡಿ ಸ್ಕಾಟ್ ಗಿಲ್ಡಿಯಾ ಮತ್ತು ಪಾಲ್ ರೆನಾಲ್ಡ್ಸ್ ಅವರನ್ನು ಸೋಲಿಸಿದರು. ಮಹಿಳೆಯರ ಡಬಲ್ಸ್‌ನಲ್ಲಿ ತ್ರಿಸಾ ಜಾಲಿ ಮತ್ತು ಗಾಯತ್ರಿ ಗೋಪಿಚಂದ್ ಜೋಡಿ ಇಂದು ಮಧ್ಯಾಹ್ನ ೧೬ ರ ಸುತ್ತಿನಲ್ಲಿ ಚೀನಾ ತೈಪೆಯ ಪಿ.ಸೀಹ್ ಮತ್ತು ಇ.ಹಂಗ್ ಅವರೊಂದಿಗೆ ಸೆಣಸಲಿದ್ದಾರೆ. ಕಾರ್ತಿಕೇ ಗುಲ್ಶನ್ ಕುಮಾರ್ ಅವರು ನಿನ್ನೆ ರಾತ್ರಿ ಚೀನಾ ತೈಪೆಯ ಜೆ ಲಿಯಾವೊ ವಿರುದ್ಧ ೧೯-೨೧, ೧೩-೨೧ ಅಂಕಗಳ ಅಂತರದಲ್ಲಿ ಪರಾಭವಗೊಳ್ಳುವ ಮೂಲಕ ಪುರುಷರ ಸಿಂಗಲ್ಸ್ ಕ್ವಾರ್ಟರ್ ಫೈನಲ್‌ಗೆ ಅರ್ಹತೆ ಪಡೆಯುವಲ್ಲಿ ವಿಫಲರಾದರು. ಪ್ಯಾರಿಸ್ ಒಲಿಂಪಿಕ್ಸ್‌ಗೆ ಇನ್ನೂ ಒಂದು ತಿಂಗಳು ಬಾಕಿ ಉಳಿದಿದ್ದು, ಪ್ರಪಂಚಾದ್ಯಂತದ ಅಗ್ರ ಆಟಗಾರರು ಅದರತ್ತ ಗಮನ ಹರಿಸಲು ಆಯ್ಕೆ ಮಾಡಿಕೊಂಡಿರುವುದರಿಂದ ಈ ಪಂದ್ಯಾವಳಿಗೆ ನೀರಸ ಪಾಲ್ಗೊಳ್ಳುವಿಕೆ ಕಾಡುತ್ತಿದೆ. ಪ್ಯಾರಿಸ್‌ಗೆ ತೆರಳಿರುವ ಭಾರತದ ಷಟ್ಲರ್‌ಗಳಾದ ಪಿವಿ ಸಿಂಧು, ಎಚ್‌ಎಸ್ ಪ್ರಣಯ್, ಲಕ್ಷ್ಯ ಸೇನ್, ಸಾತ್ವಿಕ್‌ಸಾಯಿರಾಜ್ ರಂಕಿರೆಡ್ಡಿ-ಚಿರಾಗ್ ಶೆಟ್ಟಿ ಮತ್ತು ಅಶ್ವಿನಿ ಪೊನ್ನಪ್ಪ-ತನೀಶಾ ಕ್ರಾಸ್ಟೊ ಯುಎಸ್ ಓಪನ್ ಟೂರ್ನಿಯಿಂದ ಹೊರಗುಳಿದಿದ್ದಾರೆ.

**<><*<><>*><>**

ಐಸಿಸಿ ಪುರುಷರ  ಟಿ-೨೦ ವಿಶ್ವಕಪ್ ಕ್ರಿಕೆಟ್ ನ ಸೂಪರ್ ೮ರ ಘಟ್ಟದ ಪಂದ್ಯಗಳು ನಿನ್ನೆಗೆ ಸಮಾಪನಗೊಂಡಿದ್ದು, ಎರಡು ಗುಂಪುಗಳಿಂದ ತಲಾ ಅಗ್ರ ಎರಡು ತಂಡಗಳು ಸೆಮಿಫೈನಲ್ ಹಂತಕ್ಕೆ ಅರ್ಹತೆ ಪಡೆದುಕೊಂಡಿವೆ. ಗುಂಪು-೧ ರಿಂದ ಅಗ್ರಸ್ಥಾನಿಯಾಗಿ ಭಾರತ ಮತ್ತು ಎರಡನೇ ಸ್ಥಾನಿಯಾಗಿ ಅಫ್ಘಾನಿಸ್ತಾನ ಹಾಗೂ ಗುಂಪು-೨ ರಿಂದ ಅಗ್ರಸ್ಥಾನಿಯಾಗಿ ದಕ್ಷಿಣ ಆಫ್ರಿಕಾ ಮತ್ತು ಎರಡನೇ ಸ್ಥಾನಿಯಾಗಿ ಇಂಗ್ಲೆಂಡ್ ಕೊನೆಯ ನಾಲ್ಕರ ಘಟ್ಟಕ್ಕೆ ಮುನ್ನಡೆದಿವೆ. ನಾಳೆ ಬೆಳಗ್ಗೆ ಟ್ರಿನಿಡಾಡ್‌ನ ಟರೂಬಾದಲ್ಲಿರುವ ಬ್ರಿಯಾನ್ ಲಾರಾ ಕ್ರೀಡಾಂಗಣದಲ್ಲಿ ನಡೆಯಲಿರುವ ಮೊದಲ ಸೆಮಿಫೈನಲ್‌ನಲ್ಲಿ ಅಫ್ಘಾನಿಸ್ತಾನ, ದಕ್ಷಿಣ ಆಫ್ರಿಕಾ ತಂಡವನ್ನು ಎದುರಿಸಲಿದೆ. ನಾಳೆ ಸಂಜೆ ಗಯಾನಾದ ಪ್ರಾವಿಡೆನ್ಸ್ ಸ್ಟೇಡಿಯಂನಲ್ಲಿ ನಡೆಯಲಿರುವ ಎರಡನೇ ಸೆಮಿಫೈನಲ್ ಪಂದ್ಯದಲ್ಲಿ ಭಾರತ ಮತ್ತು ಇಂಗ್ಲೆಂಡ್ ಫೈನಲ್ ಪಂದ್ಯದಲ್ಲಿ ಸ್ಥಾನಗಳಿಸಲು ಸೆಣಸಾಟ ನಡೆಸಲಿವೆ. ಟೂರ್ನಿಯ ಫೈನಲ್ ಪಂದ್ಯ ಬಾರ್ಬಡೋಸ್‌ನ ಬ್ರಿಡ್ಜ್‌ಟೌನ್‌ನ ಕೆನ್ಸಿಂಗ್ಟನ್ ಓವಲ್ ಕ್ರೀಡಾಂಗಣದಲ್ಲಿ ಇದೇ ೨೯ ರಂದು ನಡೆಯಲಿದೆ.

**<><*<>** ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು **<>*><>**

**<><*<>** ನಮ್ಮ ಮುಂದಿನ ವಾರ್ತಾ ಪ್ರಸಾರ ಅಪರಾಹ್ನ ೧.೧೦ ಕ್ಕೆ **<>*><>**